ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರವರಿ, 2021

ಕುಗ್ರಾಮಗಳಿಗೆ ಬಸ್ ಸಂಚಾರದ ವ್ಯವಸ್ಥೆ ಕಲ್ಪಿಸುವ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು ) -

467 (567) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ಸಾರ್ವಜನಿಕ ಸಾರಿಗೆ ಬಸ್ಸುಗಳು ಎಷ್ಟು ಮಾರ್ಗಗಳಲ್ಲಿ ಸಂಚರಿಸುತ್ತಿವೆ; (ವಿವರ ನೀಡುವುದು)

(ಆ) ರಾಜ್ಯದ ಹಲವು ಕುಗ್ರಾಮಗಳು ಈಗಲೂ ಸಹಾ ಬಸ್ಸು ಸಂಚಾರ ವ್ಯವಸ್ಥೆಯಿಂದ ದೂರ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು; (ವಿವರ ನೀಡುವುದು)

(ಇ) ಸಾರ್ವಜನಿಕ ಸಾರಿಗೆ ಬಸ್ಸುಗಳ ಸಂಚಾರ ವ್ಯವಸ್ಥೆ ಕಲ್ಪಿಸುವಂತೆ ಎಷ್ಟು ಗ್ರಾಮಗಳಿಂದ ಅಹವಾಲುಗಳು/ಅರ್ಜಿಗಳು ಬಂದಿರುತ್ತದೆ; (ಜಿಲ್ಲಾವಾರು/ತಾಲ್ಲೂಕುವಾರು/ಗ್ರಾಮವಾರು ವಿವರ ನೀಡುವುದು)

(ಈ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಿಂದ ನೂತನವಾಗಿ ಎಷ್ಟು ಗ್ರಾಮಗಳಿಗೆ ಬಸ್ಸು ಸಂಚಾರ ವ್ಯವಸ್ಥೆಯನ್ನು ಪ್ರಾರಂಭಿಸಲು ಸರ್ಕಾರ ಚಿಂತಿಸಿದೆ? (ವಿವರ ನೀಡುವುದು)